ಬಸವನ ಬಾಗೇವಾಡಿ ತಾಲ್ಲೂಕಿಗೆ ಅಗ್ನಿಶಾಮಕ ಠಾಣೆ

767(1221) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) ಮಾನ್ಯ ಗೃಹ ಸಚಿವರು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಸವನಬಾಗೇವಾಡಿ ತಾಲ್ಲೂಕಿನ ಬಾಗೇವಾಡಿ ಮ್ತು ಕೋಲ್ ಹಾರಕ್ಕೆ ಅಗ್ನಿಶಾಮಕ ಠಾಣೆಗಳನ್ನು ಮಂಜೂರು ಮಾಡುವ ವಿಚಾರ ಸರ್ಕಾರಕ್ಕೆ ಇದೆಯೇ;

ಆ) ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ಒಟ್ಟು ಎಷ್ಟು ಅಗ್ನಿಶಾಮಕ ಠಾಣೆಗಳನ್ನು ಮಂಜೂರು ಮಾಡಲಾಗಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು)

ಅ) ಇಲ್ಲ

ಆ) ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ಯಾವುದೇ ಅಗ್ನಿಶಾಮಕ ಠಾಣೆಗಳನ್ನು ಸ್ಥಾಪಿಸಲು ಮಂಜೂರಾತಿ ನೀಡಿರುವುದಿಲ್ಲ ಆದರೆ ಇತ್ತೀಚೆಗೆ ಸರಕಾರದ ಆದೇಶ ಸಂಖ್ಯೆ: ಒಇ 217 ಕಅಸೇ 2002 ದಿ: 27.2.2003ರಲ್ಲಿ ಅಗ್ನಿಶಾಮಕ ಠಾಣೆಯನ್ನು ಬಾಗಲಕೋಟೆ ಜಿಲ್ಲೆಯ ಇಳಕಲ್ ಪಟ್ಟಣಕ್ಕೆ ಮಂಜೂರು ಮಾಡಲಾಗಿದೆ.

ಬಾಗಲಕೋಟೆ ಮತ್ತು ಬಿಜಾಪುರ ಜಿಲ್ಲೆಗಳಲ್ಲಿ ಕೆರೆಗಳ ಹೂಳೆತ್ತಲು ಹಣ

768(1222) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೆರೆಗಳ ಹೂಳೆತ್ತುವ ಯೋಜನೆಯಡಿ ಬಾಗಲಕೋಟೆ ಮತ್ತು ವಿಜಾಪುರ ಜಿಲ್ಲೆಯ ಎಷ್ಟು ಕೆರೆಗಳನ್ನು ಕೈಗೆತ್ತಿಕೊಳ್ಳಲಾಗಿದೆ:

ಆ) ಈವರೆಗೂ ಎಷ್ಟು ಕೆರೆಗಳ ಹೂಳೆತ್ತಲಾಗಿದೆ; ಎಷ್ಟು ಕೆರೆಗಳ ಕಾರ್ಯ ಪ್ರಗತಿಯಲ್ಲಿದೆ;

ಇ) ಇದಕ್ಕಾಗಿ ಮಂಜೂರು ಮಾಡಲಾಗಿರುವ ಹಣ ಎಷ್ಟು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಮತ್ತು ಸಣ್ಣ ನೀರಾವರಿ ಸಚಿವರು)

ಅ) ರೈತ ಕಾಯಕ ಕೆರೆ ಯೋಜನೆಯಡಿಯಲ್ಲಿ ವಿಜಾಪುರ ಜಿಲ್ಲೆಯ 8 ಕೆರೆಗಳು ಹಾಗೂ ಬಾಗಲಕೋಟೆ ಜಿಲ್ಲೆಯ 6 ಕೆರೆಗಳಲ್ಲಿಯ ಹೂಳು ತೆಗೆಯುವ ಅಂಶವನ್ನೊಳಗೊಂಡ ಕೆಲಸವನ್ನು ಹಮ್ಮಿಕೊಳ್ಳಲಾಗಿದೆ.

ಆ) ವಿಜಾಪುರ ಜಿಲ್ಲೆಯ 4 ಕಾಮಗಾರಿಗಳು ಹಾಗೂ ಬಾಗಲಕೋಟೆ ಜಿಲ್ಲೆಯ 6 ಕಾಮಗಾರಿಗಳು ಪ್ರಗತಿಯಲ್ಲಿವೆ. ರೈತರ ಪಾಲ್ಗೊಳ್ಳುವಿಕೆ ಯೋಜನೆಯಲ್ಲಿ ಈವರೆಗೆ ವಿಜಾಪುರ ಜಿಲ್ಲೆಯ ಸಿಂಧಗಿ ತಾಲ್ಲೂಕಿನ ಹುಣಶ್ಯಾಳ ಕೆರೆಗಾಗಿ 1998-99ನೇ ಸಾಲಿನಲ್ಲಿ ಅಂದಾಜು ಪತ್ರಿಕೆಗೆ ರೂ. 15.00 ಲಕ್ಷಕ್ಕೆ ಮಂಜೂರಾತಿ ನೀಡಿ 1999ರಲ್ಲಿ ಕೆಲಸ ಪೂರ್ಣಗೊಳಿಸಲಾಗಿದೆ. ಇದಕ್ಕಾಗಿ 11ಲಕ್ಷ ಖರ್ಚು ಮಾಡಲಾಗಿದೆ ಹಾಗೂ ವಿಜಾಪುರ ಜಿಲ್ಲೆಯ ಬಸವನ ಬಾಗೇವಾಡಿ ತಾಲ್ಲೂಕಿನ ಕೂಡಗಿ ಕೆರೆಗಾಗಿ 1999-2000ನೇ ಸಾಲಿನಲ್ಲಿ ರೂ. 10.00 ಲಕ್ಷಕ್ಕೆ ಅಂದಾಜು ಪತ್ರಕೆಗಾಗಿ ಮಂಜೂರಾತಿ ಮಾಡಿ 2001-02ರಲ್ಲಿ ಕೆಲಸ ಪೂರ್ಣಗೊಂಡು ರೂ. 8.77 ಲಕ್ಷ ಖರ್ಚು ಮಾಡಿ ಕೆಲಸ ನಿರ್ವಹಿಸಲಾಗಿದೆ.

ಇ) ರೈತ ಕಾಯಕ ಕೆರೆ ಯೋಜನೆಯಡಿಯಲ್ಲಿ ವಿಜಾಪುರ ಜಿಲ್ಲೆಯ 8 ಕಾಮಗಾರಿಗಳಿಗಾಗಿ ಮಂಜೂರಾದ ಅಂದಾಜು ಮೊತ್ತ ರೂ. 169.60 ಲಕ್ಷ ಹಾಗೂ ಬಾಗಲಕೋಟೆ ಜಿಲ್ಲೆಯ 6 ಕಾಮಗಾರಿಗಳಿಗಾಗಿ ಮಂಜೂರಾದ ಅಂದಾಜು ಮೊತ್ತ 107.14 ಲಕ್ಷ ರೂ. ಇರುವುದು.